

# ಎದೆಗೆ ಬಿದ್ದ ಅಕ್ಷರ -ದೇವನೂರು ಮಹಾದೇವ -ಕೃತಿಕಾರರ ಪರಿಚಯ

ದೇವನೂರು ಮಹಾದೇವ ಅವರು ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ದೇವನೂರಿನಲ್ಲಿ ೧೯೪೮ರಲ್ಲಿ ಜನಿಸಿದರು. ಮೈಸೂರಿನ ಭಾರತೀಯ ಭಾಷಾ ಸಂಸ್ಥಾನದಲ್ಲಿ ಅಧ್ಯಾಪಕರಾಗಿ ಸೇವೆ ಸಲ್ಲಿಸಿದ ಇವರು ಬಂಡಾಯ ಮತ್ತು ದಲಿತ ಸಾಹಿತ್ಯದ ಪ್ರಮುಖರಲ್ಲಿ ಒಬ್ಬರಾಗಿದ್ದಾರೆ. ಆಡು ಮಾತಿನ ಧ್ವನಿ ಶಕ್ತಿಯನ್ನು ಎತ್ತರಿಸಿದ ಶಬ್ದಶಿಲ್ಪಿ ಇವರು .






ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸರ್ಕಾರಿ ಪ್ರೌಢ ಶಾಲೆ ಬೇಗೂರು


# ದೇವನೂರು ಮಹಾದೇವ -ಕೃತಿಗಳು


- ದ್ಯಾವನೂರು
- ಒಡಲಾಳ
- ಗಾಂಧಿ ಮತ್ತು ಮಾವೊ
- ನಂಬಿಕೆಯನೆಂಟ
- ನೋಡು ಮತ್ತು ಕೂಡು
- ಎದೆಗೆ ಬಿದ್ದ ಅಕ್ಷರ






ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸರ್ಕಾರಿ ಪ್ರೌಢ ಶಾಲೆ ಬೇಗೂರು

# ಪ್ರಶಸ್ತಿಗಳು

- ಕುಸುಮಬಾಲೆ ಕಾದಂಬರಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ
- ಒಡಲಾಳ ಕೃತಿಗೆ ಭಾರತೀಯ ಭಾಷಾ ಪರಿಷತ್ ಪ್ರಶಸ್ತಿ
- ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ



# ಆಶಯ ಭಾವ

ವಚನಕಾರರ ನಡೆ-ನುಡಿಗಳ ಸಮನ್ವಯವೇ ಅರಿವು. ಅಂತರಂಗದ ಹೊಂದಾಣಿಕೆಯಿಂದ ಮಾತ್ರ ಸಮಾನತೆ, ಸಾಮರಸ್ಯ ಸಾಧ್ಯ . ಅದಕ್ಕಾಗಿ ಹೋರಾಡಿದ ಮಹನೀಯರ ದಾರಿಯಲ್ಲಿ ಜಾಗತೀಕರಣವನ್ನು ರೂಪಿಸಬೇಕಿದೆ. ಕಾರುಣ್ಯ , ಸಮತೆ ,ಪ್ರಜ್ಞೆಗಳೇ ದೇವರು. ಅವು ಜಾಗೃತವಾಗಬೇಕೆಂಬುದೇ ಆಶಯವಾಗಿದೆ.

ದೇವನೂರು ಮಹಾದೇವ ವಿರಚಿತ ' ಎದೆಗೆ ಬಿದ್ದ ಅಕ್ಷರ ' ಎಂಬ ವೈಚಾರಿಕ ಬಿಡಿಲೇಖನಗಳ ಸಂಕಲನದಿಂದ ಈ ಗದ್ಯಭಾಗವನ್ನು ಆಯ್ಕೆ ಮಾಡಲಾಗಿದೆ.

# ಪ್ರವೇಶ

ಶಿಕ್ಷಣ ,ವಿಜ್ಞಾನ , ನಗರೀಕರಣದ ಪ್ರಭಾವದಿಂದ ವೈಚಾರಿಕ ಚಿಂತನೆ ತೀವ್ರವಾಯಿತು. ಅಸಮಾನತೆಯ ವಿರುದ್ಧ ದನಿಯೆತ್ತುವ ಪರಿಸ್ಥಿತಿ ನಿರ್ಮಾಣವಾಯಿತು . ಸಾಮಾಜಿಕ ಸಾಮರಸ್ಯಕ್ಕೆ ಮೊದಲನೆಯ ಅಡ್ಡಿ ಮೌಢ್ಯವೆ. ಮೌಢ್ಯ ಮರೆಯಾಗುವವರೆಗೆ ಸಾಮರಸ್ಯವೆಂಬುದು ಕನಸಾಗಿಯೇ ಉಳಿಯುತ್ತದೆ. ವಚನಕಾರರ ಸಂದೇಶಗಳನ್ನು ನಾವು ನಡೆನುಡಿಗಳಲ್ಲಿ ಅನ್ವಯಿಸಿಕೊಂಡು ಅರಿವು ಮೂಡಿಸಿಕೊಂಡು ದ್ವೇಷ ಅಸೂಯೆಗಳನ್ನು ತೊರೆದು ಸಮಷ್ಟಿಯ ಒಳಿತಿಗಾಗಿ ಸಾಮರಸ್ಯದ ನೆಲೆಯಲ್ಲಿ ಬದುಕನ್ನು ರೂಪಿಸಿಕೊಂಡಲ್ಲಿ ಸಮಾಜದ ಸ್ವಾಸ್ಥ್ಯ ಸ್ಥಿರಗೊಳ್ಳಬಹುದೆಂಬುದು ಇಲ್ಲಿನ ಆಶಯ

ಪ್ರಸ್ತುತಿ -ಮಮತಾ ಭಾಗ್ವತ್   ಸ. ಶಿ.  ಸರ್ಕಾರಿ ಪ್ರೌಢ ಶಾಲೆ ಬೇಗೂರು




# ಎದೆಗೆ ಬಿದ್ದ ಅಕ್ಷರ -



ಭೂಮಿಗೆ ಬಿದ್ದ ಬೀಜ
ಎದೆಗೆ ಬಿದ್ದ ಅಕ್ಷರ
ಇಂದಲ್ಲ ನಾಳೆ ಫಲ ಕೊಡುವುದು

ಕವಿ ಸಿದ್ಧಲಿಂಗಯ್ಯ ಒಮ್ಮೆ ನನಗೆ ಹೇಳಿದ ಕತೆಯಲ್ಲಿ ಮನೆಂಚಮ್ಮ ಎಂಬ ಗ್ರಾಮದೇವತೆಯ ಒಳಗಿಂದ ನನ್ನ ದೇವರು ಒಡಮೂಡುತ್ತದೆ - ಒಂದ್ಸಲ ಒಂದು ಗ್ರಾಮದ ಜನರೆಲ್ಲಾ ಸೇರಿ ತಮ್ಮ ದೇವತೆಗೆ ಗುಡಿಕಟ್ಟಲು  ಆರಂಭಿಸುತ್ತಾರೆ . ಹೀಗೆ ಕಟ್ತಾ ಚಾವಣಿ ಮಟ್ಟಕ್ಕೆ ಆ ಗುಡಿ ಬಂದಾಗ ಒಬ್ಬನ ಮೈಮೇಲೆ ಆ ದೇವತೆ ಮಂಚಮ್ಮ ಆವಾಹಿಸಿಕೊಂಡು  " ನಿಲ್ಸಿ ನನ್ ಮಕ್ಕಳಾ "ಎಂದು ಅಬ್ಬರ ಮಾಡುತ್ತಾಳೆ. ಆ ಅಬ್ಬರಕ್ಕೆ ಜನ ತಮ್ಮ ಕೆಲ್ಸ ನಿಲ್ಸಿ ಕಕ್ಕಾಬಿಕ್ಕಿಯಾಗಿ ನೋಡುತ್ತಿರಲು ಆ ದೇವತೆ ಹಾಗೂ ಆ ಜನರ ನಡುವೆ ಮಾತುಕತೆ ನಡೆಯುತ್ತದೆ .




ಪ್ರಸ್ತುತಿ -ಮಮತಾ ಭಾಗ್ವತ್   ಸ. ಶಿ.  ಸರ್ಕಾರಿ ಪ್ರೌಢ ಶಾಲೆ ಬೇಗೂರು

# ಎದೆಗೆ ಬಿದ್ದ ಅಕ್ಷರ -



'ಏನ್ರಯ್ಯಾ ಏನ್ ಮಾಡ್ತಾ ಇದ್ದೀರಿ ?'

' ನಿನಗೊಂದು ಗುಡಿಮನೆ ಕಟ್ತಾ ಇದ್ದೀವಿ ತಾಯಿ '

' ಓಹೋ ,ನನಗೇ ಗುಡಿಮನೆ ಕಟ್ತಾ ಇದ್ದೀರೋ ? ಹಾಗಾದರೆ ನಿಮಗೆಲ್ಲಾ ಮನೆ ಉಂಟಾ ನನ್ನ ಮಕ್ಕಳಾ ?'


' ನನಗಿಲ್ಲ ತಾಯಿ ' - ಅಲ್ಲೊಬ್ಬ ಹೇಳ್ತಾನೆ .

' ಹಾಗಾದರೆ ಎಲ್ಲರಿಗೂ ಮನೆ ಆಗುವವರೆಗೆ ನನಗೂ ಮನೆ ಬೇಡ '

ಹೀಗೆಂದ ಮಂಚಮ್ಮದೇವಿ ಮನೆಮಂಚಮ್ಮನಾಗುತ್ತಾಳೆ !

ಚಾವಣಿ ಇಲ್ಲದ ಗುಡಿಯಲ್ಲಿ ತಾಯಿ ಮನೆಮಂಚಮ್ಮ ಇಂದು ಪೂಜಿತಳಾಗುತ್ತಿದ್ದಾಳೆ .ಈ ರೀತಿ ಚಾವಣಿ ಇಲ್ಲದ ಗುಡಿಯಲ್ಲಿ ಕಾರುಣ್ಯ ಸಮತೆಯ ಬುದ್ಧನನ್ನು ಇಟ್ಟರೆ ಅದೇ ನನ್ನ ದೇವರಾಗುತ್ತದೆ .

ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸರ್ಕಾರಿ ಪ್ರೌಢ ಶಾಲೆ ಬೇಗೂರು




# ಎದೆಗೆ ಬಿದ್ದ ಅಕ್ಷರ -



ಮೊನ್ನೆ ಒಂದು ಪುಸ್ತಕ ಓದುತ್ತಾ ಇದ್ದೆ . ' ಶಿವಾನುಭವ ಶಬ್ದಕೋಶ ' ಪುಸ್ತಕದ ಹೆಸರು , ಹಳಕಟ್ಟಿಯವರು ಬರೆದ ಪುಸ್ತಕ ಅದು . ಅರಿವು , ಜ್ಞಾನದ ಬಗ್ಗೆ ಅವರು ಹೇಳಿರೋದು ನೋಡಿ ನನಗೆ ಸುಸ್ತಾಗ್ಹೋಯ್ತು . ವಚನಕಾರರ ದೃಷ್ಟಿಯಲ್ಲಿ ಅರಿವು ಅಂದರೆ ತನ್ನಷ್ಟಕ್ಕೆ ತಾನು ಇರುವ ಕೇವಲ ತಿಳಿವಳಿಕೆ ,ಜ್ಞಾನ ಮಾತ್ರ ಅಲ್ಲ ; ಅದು ಕ್ರಿಯೆಯ ಅನುಭವದಿಂದ ಒಡಮೂಡುವುದು . ಅದು ಕೇಳಿ ತಿಳಿದಿದ್ದಲ್ಲ . ಕ್ರಿಯೆಯಲ್ಲಿ ಮೂಡಿದ ತಿಳಿವಳಿಕೆ . ಅದು ತರ್ಕವಲ್ಲ. ನಡೆಯಿಂದ ನುಡಿ ಹುಟ್ಟಿದರೆ ಅದು ಅರಿವು .



ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸರ್ಕಾರಿ ಪ್ರೌಢ ಶಾಲೆ ಬೇಗೂರು

# ಎದೆಗೆ ಬಿದ್ದ ಅಕ್ಷರ -

ಈಗ ನನ್ನ ಮನಸ್ಸು ಅರಿವಿಗಾಗಿ ಕಂಡ ಕಂಡ ಕಡೆ , ಇದುವರೆಗೆ ಭಾರತೀಯ ಪರಂಪರೆಯಲ್ಲಿ ಈ ಸುಟ್ಟುಕೊಂಡು ಬರುವ ಅರಿವು ಯಾರ್ಯಾರಿಗಿದೆ ?ಎಲ್ಲೆಲ್ಲಿದೆ ? ಹುಡುಕಾಡತೊಡಗಿದೆ .

ಪ್ರಸ್ತುತಿ -ಮಮತಾ ಭಾಗ್ವತ್   ಸ. ಶಿ.  ಸರ್ಕಾರಿ ಪ್ರೌಢ ಶಾಲೆ ಬೇಗೂರು




# ಎದೆಗೆ ಬಿದ್ದ ಅಕ್ಷರ -




ಮತ್ತೆ ಇನ್ನೊಂದು . ವಚನಕಾರರು ನಮ್ಮ ಸುತ್ತಮುತ್ತ ಇರುವ ದೇವರುಗಳನ್ನು ದೇವರು ಅಂದುಕೊಂಡಿರಲಿಲ್ಲ. ಪ್ರತಿಯೊಬ್ಬ ವಚನಕಾರರಿಗೂ ಅವರವರದೇ ಇಷ್ಟದೈವ . ಅಂದರೆ ಅವರಿಗೆ ಅವರವರ ಪ್ರಜ್ಞೆಯೇ ದೇವರಾಗಿತ್ತು . ಈ ರೀತಿ ಪ್ರಜ್ಞೆಯನ್ನೇ ದೇವರು ಅಂತ ಅಂದುಕೊಂಡರೆ ಸುಡುವ ಬೆಂಕಿಯನ್ನು ನೆತ್ತಿ ಮೇಲೆ ಇಟ್ಟುಕೊಂಡಂತಾಗುತ್ತದೆ . ತಮ್ಮ ಪ್ರಜ್ಞೆ ಮುಂದೆ ಸುಳ್ಳು ಹೇಳಕಾಗಲ್ಲ . ಅದೇ ಕಷ್ಟ ಆಗೋದು . ಇತರೆ ದೇವರಿಗಾದರೆ -ಯಾವುದೇ ಉಗ್ರ ದೇವತೆ ಇರಲಿ , ಏನೋ ಸ್ವಲ್ಪ ಹೊಟ್ಟೆ ಒಳಕ್ಕೆ ಹಾಕ್ಕೋಂತ ಸುಳ್ಳು ಪಳ್ಳು ಹೇಳಿಬಿಡಬಹುದು. ಆದರೆ ಪ್ರಜ್ಞೆ ಮುಂದೆ ಇದು ನಡೆಯದು .ಈ ಇಕ್ಕಟ್ಟಿಗೆ ವಚನಕಾರರರು ಮುಖಾಮುಖಿಯಾದರು ಎಂದು ಕಾಣಿಸುತ್ತದೆ . ಅವರು ತಮ್ಮ ಕಷ್ಟ ಸುಖಾನ ,ದುಃಖ ದುಮ್ಮಾನಾನ , ಏಳುಬೀಳುಗಳನ್ನು ಅವರ ಉತ್ಕಟ ಇಕ್ಕಟ್ಟುಗಳನ್ನು ಆ ಪ್ರಜ್ಞೆ ಮುಂದೆ ಹೇಳಿಕೊಳ್ಳುತ್ತ ಒದ್ದಾಡುತ್ತಿದ್ದರೆಂದು ಕಾಣುತ್ತದೆ . ಈ ಒದ್ದಾಟಕ್ಕೆ ಅವರು ನುಡಿ ಕೊಟ್ಟರು .

## ಎದೆಗೆ ಬಿದ್ದ ಅಕ್ಷರ -

ಅವರು ಅಂದು ನುಡಿದಿದ್ದು ಇಂದು ನುಡಿದಂತೆ ಕೇಳಿಸುತ್ತದೆ . ಅದು ತನಗೆ ತಾನೆ ಕಾವ್ಯವಾಗಿಬಿಟ್ಟಿದೆ .ಈ ಬೆಂಕಿಯಂಥ ವಚನ ಸೃಷ್ಟಿಗೆ ಸಾಂತ್ವನದ ಜಾನಪದ ಕಸಿ ಮಾಡಿ ನಾವು ಹುಟ್ಟಬೇಕಾಗಿದೆ . ಹುಟ್ಟು ಪಡೆಯಬೇಕಾಗಿದೆ , ಅನ್ನಿಸತೊಡಗಿದೆ .



ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸರ್ಕಾರಿ ಪ್ರೌಢ ಶಾಲೆ ಬೇಗೂರು



# ಎದೆಗೆ ಬಿದ್ದ ಅಕ್ಷರ -

ಬುದ್ಧನ ಕಾರುಣ್ಯ ನನ್ನ ಮನದೊಳಗೆ ಕೂತ ಬಗೆಯನ್ನು ಒಂದು ಉದಾಹರಣೆಯಿಂದ ಹೇಳಲು ಪ್ರಯತ್ನಿಸುವೆ .

ಇತ್ತೀಚೆಗೆ ಶಿವಮೊಗ್ಗದ ಡಾ . ಅಶೋಕ ಪೈ (ಮನೋವೈದ್ಯರು ) ಅವರು ಮೈಸೂರಿಗೆ ಬಂದಿದ್ದರು. ಅವರು ಮನಸ್ಸಿನ ಬಗ್ಗೆ ನಡೆದಿರುವ ಒಂದು ಸಂಶೋಧನಾ ಸತ್ಯವನ್ನು ಹೇಳಿದರು.ಏನೆಂದರೆ -ಕೆಲವು ಜನ ಒಂದು ಕೊಠಡಿಯಲ್ಲಿ ಕುಳಿತು ಟೆಲಿವಿಷನ್ ನೋಡುತ್ತಿದ್ದಾರೆ ಎಂದಿಟ್ಟುಕೊಳ್ಳೋಣ .ಇನ್ನೊಂದಿಷ್ಟು ಜನ ಇದರ ಅರಿವಿಲ್ಲದೆ ಇನ್ನೊಂದು ಪಕ್ಕದ ಕೊಠಡಿಯಲ್ಲಿ ಏನೋ ಮಾತುಕತೆಯಾಡುತ್ತ ತಮ್ಮಷ್ಟಕ್ಕೆ ತಾವಿರುವವರು ಎಂದಿಟ್ಟುಕೊಳ್ಳೋಣ . ಆಗ ಟೆಲಿವಿಷನ್ ನಲ್ಲಿ ಯಾವುದಾದರೂ ಕೊಲೆ ದೃಶ್ಯ ಬಂದಾಗ ಇಲ್ಲಿ ಇದನ್ನು ನೋಡುತ್ತಿದ್ದವರ ದುಃಖದ ಭಾವನೆಯು ಇದನ್ನು ನೋಡದೆ ಇರುವ ಪಕ್ಕದ ಕೊಠಡಿಯಲ್ಲಿ ಇರುವವರ ಮನಸ್ಸಿಗೂ ಮುಟ್ಟಿ ಅವರ ಮನಸ್ಸು ಸ್ವಲ್ಪ ಮಟ್ಟಿಗೆ ದುಗುಡಗೊಳ್ಳುತ್ತದಂತೆ . ಅದೇ ಟೆಲಿವಿಷನ್ ನಲ್ಲಿ ಯಾವುದಾದರೂ ನೃತ್ಯ ದೃಶ್ಯ ಬಂದಾಗ ಅದನ್ನು ನೋಡುತ್ತಿದ್ದವರ ಖುಷಿ ಭಾವನೆಯು ಪಕ್ಕದ ಕೊಠಡಿಯಲ್ಲಿ ಇದನ್ನು ನೋಡದ ತಮ್ಮಷ್ಟಕ್ಕೆ ತಾವೇ ಇದ್ದವರ ಮನಸ್ಸಿನ ಮೇಲೂ ಪರಿಣಾಮ ಮಾಡಿ ಸ್ವಲ್ಪ ಮಟ್ಟಿಗೆ ಸಂತೋಷದ ಭಾವನೆ ಉಂಟಾ



ಪ್ರಸ್ತುತಿ -ಮಮತಾ ಭಾಗ್ವತ್   ಸ. ಶಿ. ಸರ್ಕಾರಿ ಪ್ರೌಢ ಶಾಲೆ ಬೇಗೂರು





# ಎದೆಗೆ ಬಿದ್ದ ಅಕ್ಷರ -





ಈ ನಿಜ ಏನನ್ನು ಹೇಳುತ್ತದೆ ? ಯಾವ ಜೀವಿಯೂ ತನ್ನಷ್ಟಕ್ಕೆ ತಾನಿಲ್ಲ  ಎಂದು ಹೇಳುತ್ತದೆ . ಯಾವುದೇ ಒಂದು ಜೀವಿಗೆ ಆಗುವ ದುಃಖ ದುಮ್ಮಾನ ಪರಿಸರದಲ್ಲಿ ಉಸಿರಾಡುತ್ತ ಎಲ್ಲಾ ಜೀವಗಳಲ್ಲೂ ಕಂಪನ ಉಂಟು ಮಾಡುತ್ತಿರುತ್ತದೇನೊ . ಈ ಅನುಕಂಪನ ಇಡೀ ಜೀವಸಂಕುಲವನ್ನೇ ಒಂದು ಎಂದು ಹೇಳುತ್ತದೆ .

ಬುದ್ಧನ ಕಾರುಣ್ಯ ಇಲ್ಲಿಂದಲೇ ಮೂಡಿರಬಹುದು .

ಕೊಲೆ ಸುಲಿಗೆ ದ್ವೇಷ ಅಸೂಯೆಗಳಿಂದ ಕ್ಷೋಭೆಗೊಂಡು ನರಳುತ್ತಿರುವ ಜಗತ್ತು -ಅದು ಘಾಸಿಗೊಳಿಸುವುದು -ತನ್ನ ಆಳದ ಒಳ ಸಮಷ್ಟಿ ಮನಸ್ಸನ್ನೆ . ಈ  ಸಮಷ್ಟಿ ಮನಸ್ಸಲ್ಲಿ ಎಲ್ಲರೂ ಇರುತ್ತಾರೆ .

ನಾವು ಮನುಷ್ಯರು ನಮ್ಮೊಳಗೆ ಮೂರ್ಛಾವಸ್ಥೆಯಲ್ಲಿರುವ ಕಾರುಣ್ಯವನ್ನು ಎಚ್ಚರಗೊಳಿಸಬೇಕಾಗಿದೆ .

ಈ ಎಳೆ ಹಿಡಿದು ಜಾಗತೀಕರಣವನ್ನೂ ರೂಪಿಸಬೇಕಾಗಿದೆ . ಆಗ ಮಾತ್ರವೇ ಅದು ಜಾಗತೀಕರಣ



ಪ್ರಸ್ತುತಿ -ಮಮತಾ ಭಾಗ್ವತ್   ಸ. ಶಿ.  ಸರ್ಕಾರಿ ಪ್ರೌಢ ಶಾಲೆ ಬೇಗೂರು